## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ ನಂ.1231/2021**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಅಬಕಾರಿ ಪೊಲೀಸ್

-ಃಃ ವಿರುದ್ಧ ಃಃ-

ಆರೋಪಿ ಃ ಜನಾರ್ಧನ ರೆಡ್ಡಿ ತಂದೆ ಮಲ್ಲಾರೆಡ್ಡಿ ಮಂಕಾಲ್,
ವಃ 62 ವರ್ಷ, ಉಃ ಕೂಲಿ,
ಸಾಃ ರಂಜೋಳ, ತಾಃ ಸೇಡಂ,
ಜಿಃ ಕಲಬುರಗಿ.

----

### ದೋಷಾರೋಪಣೆ

ನಾನು ಶ್ರೀಮತಿ ಲಲಿತಾ ಕುದರಿಮತಿ, ಬಿಕಾಂ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 03-04-2020 ರಂದು ಸಮಯ ಸಂಜೆ 04.00 ಗಂಟೆ ಸುಮಾರಿಗೆ, ಚಾ. ಸಾ. 1 ರವರು ಸಿಬ್ಬಂದಿಯವರೊಂದಿಗೆ ಮತ್ತು ಪಂಚರೊಂದಿಗೆ ಕರೋನ ವೈರಸ್ ಹರಡುವ ಭೀತಿಯಿಂದ ಜಿಲ್ಲೆಯಾದ್ಯಂತ ಮದ್ಯ ನಿಷೇಧ ಜಾರಿಯಲ್ಲಿರುವಾಗ ಸೇಡಂ ತಾಲ್ಲೂಕಿನ ರಂಜೋಳ ಗ್ರಾಮದ ಆರೋಪಿಗೆ ಸೇರಿದ ಮನೆಯಲ್ಲಿ ಅಬಕಾರಿ ದಾಳಿ ಮಾಡಿದಾಗ ಸದರಿ ಸ್ಥಳದಲ್ಲಿ ಅಕ್ರಮವಾಗಿ ಒಂದು ಬಿಳಿ ಬಣ್ಣದ ಪ್ಲಾಸ್ಟಿಕ ಚೀಲದಲ್ಲಿ 90 ಅಳತೆವುಳ್ಳ 72 ಒರಿಜನಲ್ ಚಾಯಿಸ್ ವಿಸ್ಕಿ ತುಂಬಿದ ಟೆಟ್ರಾ ಪ್ಯಾಕೇಟಗಳು ಮಾರಾಟ / ಸಾಗಾಣಿಕೆ ಮಾಡುವ ಉದ್ದೇಶದಿಂದ ಮನೆಯಲ್ಲಿ ಸಂಗ್ರಹಿಸಿ ಇಟ್ಟಿರುವುದು ಕಂಡು ಬಂದಿದ್ದು , ಹಾಗೂ ಸದರಿ ಮದ್ಯವನ್ನು ರಸಾಯನಿಕ ಪರೀಕ್ಷೆಗೆ ಒಳಪಡಿಸಲಾಗಿ ಮಾನವ ಸೇವನೆಗೆ ಯೋಗ್ಯವಾಗಿರುತ್ತದೆ ಎಂದು ತಿಳಿದಿರುತ್ತದೆ ಕಾರಣ ಆರೋಪಿತರಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 13, 14, 15 ರ ದಂಡನೀಯ ಕಲಂ 32 , 38 (ಎ) ಮತ್ತು 43 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಪ್ರ.ದ.ನ್ಯಾದಂ. ಸೇಡಂ.

ದಿನಾಂಕಃ 28-06-2024